ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	**1254(1402)**
ಸದಸ್ಯರ ಹೆಸರು	**ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ)**
ಉತ್ತರಿಸಬೇಕಾದ ಸಚಿವರು	**ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು)**

ಅ) ಜೈವಿಕ ಇಂಧನ ಬೆಳಗಳಾದ ಜತ್ರೋಪ, ಹೊಂಗೆ, ಬೇವು ಬೆಳೆಯನ್ನು ಬೆಳೆಯಲು ಸರ್ಕಾರ ಇತ್ತೀಚಿನ ದಿನಗಳಲ್ಲಿ ಮಾಧ್ಯಮಗಳ ಮೂಲಕ ಪ್ರಚಾರ ಮಾಡುತ್ತಿರುವುದು ನಿಜವೇ,

ಹೌದು

ಆ) ಹಾಗಿದ್ದಲ್ಲಿ, ಈ ಬೆಳೆಗಳನ್ನು ಸಂಸ್ಕರಿಸಲು ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಆಶ್ರಯದಲ್ಲಿ ಹಾಸನದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಜೈವಿಕ ಇಂಧನ ಪಾರ್ಕ್‌ನಲ್ಲಿ ಜೈವಿಕ ಇಂಧನ ಬೆಳೆಗಳ ಉತ್ಪನ್ನವನ್ನು ಸಂಸ್ಕರಿಸುವ ಘಟಕವನ್ನು ಸ್ಥಾಪಿಸುವ ಕಾರ್ಯಕ್ರಮವಿದೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	**1255(1403)**
ಮಾನ್ಯ ಸದಸ್ಯರ ಹೆಸರು	**ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ)**
ಉತ್ತರಿಸಬೇಕಾದ ಸಚಿವರು	**ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು)**

ಅ) ಚಾಮರಾಜನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಅರಿಶಿನ ಬೆಳೆಗೆ ಮಾರುಕಟ್ಟೆ ಮತ್ತು ಸಂಸ್ಕರಣ ಘಟಕ ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ,

ಚಾಮರಾಜನಗರ ಜಿಲ್ಲೆಯಲ್ಲಿ ಚಾಮರಾಜನಗರ, ಗುಂಡ್ಲುಪೇಟೆ ಹಾಗೂ ಕೊಳ್ಳೇಗಾಲದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳನ್ನು ಸ್ಥಾಪಿಸಿದ್ದು, ಅವುಗಳ ವ್ಯಾಪ್ತಿಯಲ್ಲಿ ಅರಿಶಿನ ಉತ್ಪನ್ನವನ್ನು ಮಾರಾಟ ನಿಯಂತ್ರಣಕ್ಕಾಗಿ ಅಧಿಸೂಚನೆಗೊಳಿಸಲಾಗಿದೆ

ಸಂಸ್ಕರಣ ಘಟಕ ಸ್ಥಾಪಿಸುವ ವಿಷಯವು ಈಗ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ